ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

File No: DTE-ADMI0ACM2/26/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:12-10-2020.

**- :: ಸು ತ್ತೋ ಲೆ ::-**

**ವಿಷಯ:** 2020-21ನೇ ಸಾಲಿನಲ್ಲಿ 03 & 05ನೆ ಸೆಮಿಸ್ಟರ್ ಡಿಪ್ಲೋಮಾ ಅಭ್ಯರ್ಥಿಗಳಿಗೆ **ದಂಡ ಶುಲ್ಕವಿಲ್ಲದೆ ಪ್ರವೇಶಾತಿ ನೀಡಲು ಅವಧಿ ವಿಸ್ತರಿಸುವ** ಬಗ್ಗೆ.

**ಉಲ್ಲೇಖ:** 1. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ದಿ:08-10-2020.
2. ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿಗಳು.

-0000000-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಈ ಕಛೇರಿ ಸುತ್ತೋಲೆಯಲ್ಲಿ ಸರ್ಕಾರಿ, ಅನುದಾನಿತ ಪಾಲಿಟೆಕ್ನಿಕ್ ವಿದ್ಯಾರ್ಥಿಗಳ 01, 03 ಮತ್ತು 05ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪ್ರವೇಶ ಹಾಗೂ ಮರು ಪ್ರವೇಶ ಪಡೆಯುವ ನಿಟ್ಟಿನಲ್ಲಿ ಅಂತಿಮ ದಿನಾಂಕ:15-10-2020 ರ ಒಳಗೆ ದಂಡ ಶುಲ್ಕ ವಿಲ್ಲದೆ ಪ್ರವೇಶ ನೀಡಲು ಅವಧಿಯನ್ನು ನಿಗಧಿಗೊಳಿಸಲಾಗಿತ್ತು. ಉಲ್ಲೇಖ(2)ರ ಪ್ರಾಂಶುಪಾಲರ ಮನವಿ ಪತ್ರದಲ್ಲಿ 03 & 05ನೇ ಸೆಮಿಸ್ಟರ್ ಡಿಪ್ಲೋಮಾ ವಿದ್ಯಾರ್ಥಿಗಳ ಪ್ರವೇಶ & ವರ್ಗಾವಣೆ ಅವಧಿಯನ್ನು ವಿಸ್ತರಣೆ ಮಾಡಲು ಕೋರಿರುವುದನ್ನು ಪರಿಗಣಿಸಿ, ಕೋವಿಡ್-19 ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ **01, 03 ಮತ್ತು 05ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪ್ರವೇಶ, ವಿದ್ಯಾರ್ಥಿಗಳ ವರ್ಗಾವಣೆ ಹಾಗೂ ಮರು ಪ್ರವೇಶ ಪಡೆಯಲು ಈ ಕೆಳಕಂಡಂತೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

| | | |
|---|---|---|
| 1. | ತೃತೀಯ ಸೆಮಿಸ್ಟರ್ ಹಾಗೂ ಐದನೇ ಸೆಮಿಸ್ಟರ್ ಡಿಪ್ಲೋಮಾ ಅಭ್ಯರ್ಥಿಗಳ ಪ್ರವೇಶ ಹಾಗೂ ಪ್ರಥಮ ಸೆಮಿಸ್ಟರ್, ತೃತೀಯ ಸೆಮಿಸ್ಟರ್ ಮತ್ತು ಅಂತಿಮ ಸೆಮಿಸ್ಟರ್ ಡಿಪ್ಲೋಮಾ ವ್ಯಾಸಂಗಗಳಿಗೆ ಸೇರ ಬಯಸುವ ರಿಪೀಟರ್ ಅಭ್ಯರ್ಥಿಗಳ ಪ್ರವೇಶದ ಅಂತಿಮ ದಿನಾಂಕ | **ದಿನಾಂಕ: 29-10-2020** ರ ಒಳಗೆ ಯಾವುದೇ ದಂಡ ಶುಲ್ಕವಿಲ್ಲದೆ ಪ್ರವೇಶ ನೀಡಬಹುದಾಗಿದೆ. |
| 2. | ಒಂದು ಸರ್ಕಾರಿ ಪಾಲಿಟೆಕ್ನಿಕ್‌ನಿಂದ ಮತ್ತೊಂದು ಸರ್ಕಾರಿ ಪಾಲಿಟೆಕ್ನಿಕ್‌ಗೆ ಅಥವಾ ಅನುದಾನಿತ ಪಾಲಿಟೆಕ್ನಿಕ್‌ಗೆ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ನಿಂದ ಸರ್ಕಾರಿ ಪಾಲಿಟೆಕ್ನಿಕ್‌ಗೆ ಅಥವಾ ಇನ್ನೊಂದು ಅನುದಾನಿತ ಪಾಲಿಟೆಕ್ನಿಕ್‌ಗೆ ವರ್ಗಾವಣೆ ಕೋರಿದ ತೃತೀಯ ಸೆಮಿಸ್ಟರ್ ಮತ್ತು ಐದನೇ ಸೆಮಿಸ್ಟರ್ ಡಿಪ್ಲೋಮಾ ಅಭ್ಯರ್ಥಿಗಳಿಗೆ ಪ್ರವೇಶ ನೀಡಲು ಅಂತಿಮ ದಿನಾಂಕ. | ವಿದ್ಯಾರ್ಥಿಗಳ ವರ್ಗಾವಣೆಗೆ ಸಂಬಂಧಿಸಿದಂತೆ **ದಿನಾಂಕ:29-10-2020** ರ ಒಳಗೆ ಕೆಳಕಂಡ ದಾಖಲೆಗಳನ್ನು ಪಡೆದು ವರ್ಗಾವಣೆಯನ್ನು ಆಯಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರ ಹಂತದಲ್ಲೇ ಕೈಗೊಳ್ಳಬಹುದಾಗಿದೆ. ನಂತರ ನಿಗಧಿತ ಅವಧಿಯೊಳಗೆ ವರ್ಗಾವಣೆಗೊಂಡ ವಿದ್ಯಾರ್ಥಿಗಳ ಪಟ್ಟಿಯನ್ನು ಅನುಮೋದನೆಗಾಗಿ ಕಾರ್ಯದರ್ಶಿಗಳು ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು ಇವರಿಗೆ ಸಲ್ಲಿಸತಕ್ಕದ್ದು.<br>1) ಅಭ್ಯರ್ಥಿಯ ಮನವಿ<br>2) ಎರಡೂ ಪಾಲಿಟೆಕ್ನಿಕ್‌ಗಳ ನಿರಾಪೇಕ್ಷಣ ಪ್ರಮಾಣ ಪತ್ರ<br>3) ದಿನಾಂಕ: 29-10-2020 ರ ಒಳಗೆ ಲೆಕ್ಕಶೀರ್ಷಿಕೆ: 0202-02-101-0-04-Polytechnic ಗೆ ಪಾವತಿ ಮಾಡಲಾದ ವರ್ಗಾವಣೆ ಶುಲ್ಕ ₹ 1,000/-ಕ್ಕೆ ಸಂಬಂಧಿಸಿದಂತೆ ರಸೀದಿ/ಚಲನ್ |

ಮೇಲ್ಕಂಡ ಅಂತಿಮ ದಿನಾಂಕ ಮುಗಿದ ನಂತರ ಪ್ರವೇಶ ಶುಲ್ಕಕ್ಕೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಸುತ್ತೋಲೆಯನ್ನು ಹೊರಡಿಸಲಾಗುವುದು ಹಾಗೂ ಪರೀಕ್ಷಾ ಶುಲ್ಕಕ್ಕೆ ಸಂಬಂಧಿಸಿದಂತೆ ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ ಇವರು ಹೊರಡಿಸುವ ಸುತ್ತೋಲೆಯಂತೆ ಕ್ರಮತೆಗೆದುಕೊಳ್ಳತಕ್ಕದ್ದು.

ಮೇಲ್ಕಂಡಂತೆ ಅವಧಿ ವಿಸ್ತರಣೆ ಹೊರತುಪಡಿಸಿ ಉಳಿದಂತೆ ಈ ಕಛೇರಿ ಸುತ್ತೋಲೆಯಲ್ಲಿನ ಸೂಚನೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸಿ ಪ್ರವೇಶ ನೀಡುವುದು. ನಿಯಮಗಳನ್ನು ಮೀರಿ ಮಾಡಿದ ಪ್ರವೇಶಗಳಿಗೆ ಸಂಬಂಧಿಸಿದ ಪ್ರಿನ್ಸಿಪಾಲರೇ ನೇರ ಜವಾಬ್ದಾರರಾಗುತ್ತಾರೆ.

**ಆಯುಕ್ತರು**

*ಗೆ,*

*ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿ ಹಾಗೂ ಅನುಸರಣೆಗಾಗಿ.*

<u>ಪ್ರತಿ ಇವರಿಗೆ ಮಾಹಿತಿಗಾಗಿ:</u>

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯದರ್ಶಿಯವರ ಆಪ್ತಶಾಖೆಗೆ.
4. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
5. ಇ-ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಆರ್.ಡಿ.ಎಂ ವಿಭಾಗಗಳಿಗೆ.
7. ಇಆರ್‌ಎಸ್(3) ವಿಭಾಗಕ್ಕೆ. 8.ಕಛೇರಿ ಪ್ರತಿ.